## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 684 |
| ಸದಸ್ಯರ ಹೆಸರು | : | ಶ್ರೀ. ಬಿ.ಜಿ.ಪಾಟೀಲ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 25/09/2020 |
| ಉತ್ತರಿಸುವ ಸಚಿವರು | : | ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯತ್‌ಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ಇದೆ. |
| ಆ | ಇದ್ದಲ್ಲಿ, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಎಷ್ಟು ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಗುರುತಿಸಲಾಗಿದೆ; (ವಿವರ ನೀಡುವುದು) | ಕಲಬುರ್ಗಿ ಜಿಲ್ಲೆಯ ಜೇವರ್ಗಿ ತಾಲ್ಲೂಕಿನ ಯಡ್ರಾಮಿ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಉದ್ದೇಶಿಸಿ ದಿನಾಂಕ:11/09/2020 ರಂದು ಪ್ರಾಥಮಿಕ ಅಧಿಸೂಚನೆಯನ್ನು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿದೆ.<br><br>ಯಾದಗಿರಿ ಜಿಲ್ಲೆಯ ವಡಗೇರಾ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಕುರಿತು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |
| ಇ | ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ನಿಗದಿ ಮಾಡಿರುವ ಮಾನದಂಡಗಳೇನು? (ವಿವರ ನೀಡುವುದು) | 2011ರ ಜನಗಣತಿಯನ್ವಯ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕರ್ನಾಟಕ ಪುರಸಭೆ ಅಧಿನಿಯಮ 1964 ಕಲಂ 349 ರನ್ವಯ ಈ ಕೆಳಕಂಡ ಮಾನದಂಡಗಳಿರುತ್ತದೆ:<br>1. ಗ್ರಾಮ ಪಂಚಾಯಿತಿ ಪ್ರದೇಶದ ಜನಸಂಖ್ಯೆಯು 10,000ಕ್ಕೆ ಕಡಿಮೆ ಇಲ್ಲದಂತೆ ಹಾಗೂ 20,000ಕ್ಕೆ ಹೆಚ್ಚಿಲ್ಲದಂತಿರಬೇಕು.<br>2. ಅಂತಹ ಪ್ರದೇಶದ ಜನಸಂಖ್ಯೆಯು ಜನಸಾಂದ್ರತೆಯು ಆ ಪ್ರದೇಶದ ಒಂದು ಚ.ಕಿ.ಮೀ ವಿಸ್ತೀರ್ಣಕ್ಕೆ 400 ಕ್ಕಿಂತ ಕಡಿಮೆ ಇಲ್ಲದಿರುವುದು.<br>3. ಕೃಷಿಯೇತರ ಚಟುವಟಿಕೆಗಳಲ್ಲಿನ ಉದ್ಯೋಗಾವಕಾಶಗಳ ಶೇಕಡಾವಾರು ಪ್ರಮಾಣವು ಒಟ್ಟು ಉದ್ಯೋಗದ ಪ್ರಮಾಣಕ್ಕಿಂತ ಶೇ.50ಕ್ಕಿಂತ ಕಡಿಮೆ ಇಲ್ಲದಿರುವುದು.<br><br>ಆದರೆ, ದಿನಾಂಕ 19/03/205ರಂದು ನಡೆದ ಸಚಿವ ಸಂಪುಟ ಸಭೆಯ ತೀರ್ಮಾನದಂತೆ 2011ರ ಜನಗಣತಿಯನ್ವಯ 15,000ಕ್ಕಿಂತ ಹೆಚ್ಚು ಜನಸಂಖ್ಯೆ ಹೊಂದಿರುವ ಗ್ರಾಮ ಪಂಚಾಯಿತಿಗಳನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ:ನಅಇ 38 ಪಿಆರ್‌ಸಿಕ್ಯೂ 2020.

(ಡಾ॥ ನಾರಾಯಣ ಗೌಡ)

ಪೌರಾಡಳಿತ, ತೋಟಗಾರಿಕೆ ಹಾಗೂ ರೇಷ್ಮೆ ಸಚಿವರು